## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎಸ್. ಕ್ರಿಯಾ ಯೋಜನೆ ಮುಂದುವರೆಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:** ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ ಅಭಿಯಾನ (ನಗರ & ಗ್ರಾಮೀಣ) ಇವರ ಪತ್ರ ಸಂಖ್ಯೆ:ಕೆಎಸ್ಆರ್ಎಲ್ಪಿಎಸ್/ಎಂಇ&ಎಲ್/31/2021-22, ದಿನಾಂಕ:28-03-2022.

*******

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಅಭಿಯಾನ ನಿರ್ದೇಶಕರು, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ (ಕೆಎಸ್ಆರ್ಎಲ್ಪಿಎಸ್) ರವರು 2022-23ನೇ ಸಾಲಿನಲ್ಲಿ ಸಂಜೀವಿನಿ-ಕೆಎಸ್ಆರ್ಎಲ್ಪಿಎಸ್ ಕೇಂದ್ರ ಪುರಸ್ಕೃತ/ಕೇಂದ್ರ ವಲಯ ಯೋಜನೆಗಳಾದ ಎನ್.ಆರ್.ಎಲ್.ಎಂ., ಎಸ್.ವಿ.ಇ.ಪಿ, ಡಿ.ಡಿ.ಯು.ಜಿ.ಕೆ.ವೈ., ಎನ್.ಆರ್.ಇ.ಟಿ.ಪಿ. ಮತ್ತು ಆರ್‌ಸೆಟಿ ಕಾರ್ಯಕ್ರಮಗಳನ್ನು ಮುಂದುವರೆಸಲು ಕೋರಿರುತ್ತಾರೆ.

ಈ ಯೋಜನೆಗಳಿಗೆ 2022-23ನೇ ಸಾಲಿನಲ್ಲಿ ಆಯವ್ಯಯ ಹಂಚಿಕೆ ಹಾಗೂ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಹಾಗೂ ರಾಜ್ಯ ಸರ್ಕಾರದ ಅಧಿಕಾರಯುಕ್ತ ಸಮಿತಿ ಅನುಮೋದಿಸಿದ ಕೇಂದ್ರ ಹಾಗೂ ರಾಜ್ಯದ ಪಾಲಿನ ವಿವರಗಳು ಈ ಕೆಳಕಂಡಂತಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ | ಲೆಕ್ಕ ಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರುವ ಅನುದಾನ | | | 2022-23ರ ಸಾಲಿನ ಎಂಒಆರ್‌ಡಿ ಕ್ರಿಯಾ ಯೋಜನೆ | | |
|---|---|---|---|---|---|---|---|---|
| | | | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
| 1. | ಎನ್‌ಆರ್‌ಎಲ್‌ಎಂ | 2501-01-198-6-01(ಕೇ)<br>2501-01-198-6-02 (ರಾ) | 12000.00 | 8200.00 | 20200.00 | 48880.71 | 32587.14 | 81467.85 |
| 2. | ಎಸ್‌ವಿಇಪಿ * | 2501-01-198-6-03(ಕೇ)<br>2501-01-198-6-04 (ರಾ) | 437.00 | 291.00 | 728.00 | 3582.00 | 2388.00 | 5970.00 |
| 3. | ಆರ್‌ಸಿಟಿ ** | 2501-00-101-0-05(ಕೇ) | 300.00 | 0 | 300.00 | 300.00 | 0 | 300.00 |
| 4. | ಎನ್‌ಆರ್‌ಇಟಿಪಿ | 2501-00-101-0-07(ಕೇ)<br>2501-01-198-6-08(ರಾ) | 765.00 | 509.00 | 1272.00 | 3720.00 | 2480.00 | 6200.00 |
| 5. | ಡಿಡಿಯುಜಿಕೆವೈ | 2501-00-101-0-09(ಕೇ)<br>2501-01-198-6-10 (ರಾ) | 1500.00 | 1000.00 | 2500.00 | 10388.40 | 6925.60 | 17314.00 |
| | ಒಟ್ಟು | | 15000.00 | 10000.00 | 25000.00 | 66871.11 | 44380.74 | 111251.85 |

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 51 ಉಜೀಇ 2022, ಬೆಂಗಳೂರು ದಿನಾಂಕ: 16-04-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ (ಕೆಎಸ್ಆರ್ಎಲ್ಪಿಎಸ್) ಸಂಸ್ಥೆಯು ಅನುಷ್ಠಾನಗೊಳಿಸುತ್ತಿರುವ ಕೇಂದ್ರ ಪುರಸ್ಕೃತ/ಕೇಂದ್ರ ವಲಯ ಯೋಜನೆಗಳಾದ ಎನ್‌ಆರ್‌ಎಲ್‌ಎಂ, ಎಸ್.ವಿ.ಇ.ಪಿ, ಡಿ.ಡಿ.ಯು.ಜಿ.ಕೆ.ವೈ., ಎನ್.ಆರ್.ಇ.ಟಿ.ಪಿ. ಮತ್ತು ಆರ್‌ಸೆಟಿ ಕಾರ್ಯಕ್ರಮಗಳನ್ನು ರಾಜ್ಯದ ಅಧಿಕಾರಯುಕ್ತ ಸಮಿತಿ ಹಾಗೂ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಅನುಮೋದಿಸಿರುವ ಈ ಕೆಳಕಂಡ ಕೋಷ್ಟಕದಲ್ಲಿ ವಿವರಿಸಿದಂತೆ ಯೋಜನೆಗಳನ್ನು ಮುಂದುವರೆಸಿ ಆದೇಶಿಸಿದೆ.

...2/-

(ರೂ. ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ | ಲೆಕ್ಕ ಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿರುವ ಅನುದಾನ | | | 2022-23ರ ಸಾಲಿನ ಎಂಓಆರ್‌ಡಿ ಕ್ರಿಯಾ ಯೋಜನೆ | | |
|---|---|---|---|---|---|---|---|---|
| | | | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
| 1. | ಎನ್‌ಆರ್‌ಎಲ್‌ಎಂ | 2501-01-198-6-01(ಕೇ)<br>2501-01-198-6-02 (ರಾ) | 12000.00 | 8200.00 | 20200.00 | 48880.71 | 32587.14 | 81467.85 |
| 2. | ಎಸ್‌ವಿಇಪಿ * | 2501-01-198-6-03(ಕೇ)<br>2501-01-198-6-04 (ರಾ) | 437.00 | 291.00 | 728.00 | 3582.00 | 2388.00 | 5970.00 |
| 3. | ಆರ್‌ಸೆಟಿ ** | 2501-00-101-0-05(ಕೇ) | 300.00 | 0 | 300.00 | 300.00 | 0 | 300.00 |
| 4. | ಎನ್‌ಆರ್‌ಇಟಿಪಿ | 2501-00-101-0-07(ಕೇ)<br>2501-01-198-6-08(ರಾ) | 765.00 | 509.00 | 1272.00 | 3720.00 | 2480.00 | 6200.00 |
| 5. | ಡಿಡಿಯುಜಿಕೆವೈ | 2501-00-101-0-09(ಕೇ)<br>2501-01-198-6-10 (ರಾ) | 1500.00 | 1000.00 | 2500.00 | 10388.40 | 6925.60 | 17314.00 |
| | ಒಟ್ಟು | | 15000.00 | 10000.00 | 25000.00 | 66871.11 | 44380.74 | 111251.85 |

**ಷರತ್ತುಗಳು:-**

ಈ ಆದೇಶದಲ್ಲಿ ಮುಂದುವರೆಸಿರುವ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಯೋಜನೆಗಳ ಪ್ರಸ್ತಾವನೆಗಳು ಇದ್ದಲ್ಲಿ, ಸರ್ಕಾರದ ಪ್ರತ್ಯೇಕ ಮಂಜೂರಾತಿಯನ್ನು ಪಡೆದ ನಂತರವೇ ಅನುಷ್ಠಾನಗೊಳಿಸತಕ್ಕದ್ದು.

ಮುಂದುವರೆದ ಯೋಜನೆಗಳಡಿಯಲ್ಲಿ ಖರೀದಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧ್ಯಾದೇಶ 2000ರ ಮತ್ತು ಅದರಡಿಯಲ್ಲಿನ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.

ಗಣಕಯಂತ್ರಗಳ ಖರೀದಿಗೆ ಸಂಬಂಧಿಸಿದಂತೆ ಇ-ಆಡಳಿತ ಇಲಾಖೆಯು ಸೂಚಿಸಿರುವಂತೆ ಕ್ರಿಯಾ ಯೋಜನೆಗೆ ರಾಜ್ಯ ಮಟ್ಟದ ಉನ್ನತಾಧಿಕಾರಿ ಸಮಿತಿಯ ಮತ್ತು ಟ್ಯಾಪ್‌ನ ಅನುಮೋದನೆಯನ್ನು ಪಡೆಯತಕ್ಕದ್ದು.

ಉಪಕರಣ/ಗಣಕಯಂತ್ರ ಇತ್ಯಾದಿ ಖರೀದಿಗೆ ಸಂಬಂಧಿಸಿದಂತೆ, ಇ-ಆಡಳಿತ ಇಲಾಖೆಯ ಆದೇಶಗಳು, ತಾಂತ್ರಿಕ ಸಮಿತಿ ಒಪ್ಪಿಗೆ ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಕೇಂದ್ರ ಸರ್ಕಾರವು NRLM, SVEP, NRETP, RSETI & DDUGKY ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ನೀಡಿರುವ ಮಾರ್ಗಸೂಚಿಗಳನ್ವಯ ಹಾಗೂ ಕಾಲ-ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸತಕ್ಕದ್ದು.

...3/-

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: **ಆಇ 289 ವೆಚ್ಚ-9/2022 ದಿನಾಂಕ:12-04-2022** ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 39 ಎಂಇಡಿ 2022, ದಿನಾಂಕ: 11-04-2022 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ವಿಶೇಷ ಕೋಶ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ, ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್‌ರೋಡ್, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.

**ಮಾಹಿತಿಗಾಗಿ:-**

1. ಮಾನ್ಯ [illegible], ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.